## ದಿನಾಂಕ 21-11-2022 ರಂದು ಬೆಳಿಗ್ಗೆ 12.30 ಗಂಟೆಗೆ ವಾರ್ಡ್-88 ರ ಕೋಡಿಹಳ್ಳಿ ಸರ್ಕಾರಿ ಶಾಲೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಾರ್ಡ್ ಸಂಖ್ಯೆ-88 ಜೀವನ್‌ಭೀಮಾನಗರದ ಕೋಡಿಹಳ್ಳಿ ಸರ್ಕಾರಿ ಶಾಲೆಯಲ್ಲಿ ದಿನಾಂಕ: 21-11-2022 ರಂದು ಬೆಳಿಗ್ಗೆ 12.30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಈ ಕೆಳಕಂಡಂತೆ ಸದಸ್ಯರು ಸಭೆಯಲ್ಲಿ ಭಾಗವಹಿಸಿರುತ್ತಾರೆ.

**ಸಭೆಗೆ ಹಾಜರಿದ್ದ ಸದಸ್ಯರು ಹಾಗೂ ಅಧಿಕಾರಿಗಳು**

1. ಶ್ರೀಮತಿ. ಸಾವಿತ್ರಿ - ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು, ವಾರ್ಡ್-88.
2. ಶ್ರೀಮತಿ. ಶಿಲ್ಪಶ್ರೀ - ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ.
3. ಶ್ರೀ.ಹನುಮಂತಪ್ಪ - ಕಿರಿಯ ಘನತ್ಯಾಜ್ಯ ಪರಿವೀಕ್ಷಕರು
4. ಶ್ರೀ.ಲೋಹಿತ್ - ಎ. ಇ, ಬಿಡಬ್ಲ್ಯೂಎಸ್‌ಎಸ್‌ಬಿ
5. ಶ್ರೀ.ಚಂದ್ರ - ಸದಸ್ಯರು
6. ಶ್ರೀ.ಪಾಲ್ ಅಮಲ್‌ರಾಜ್- ಸದಸ್ಯರು
7. ಶ್ರೀ.ಸದಾಶಿವನ್ - ಸದಸ್ಯರು
8. ಶ್ರೀ.ನವೀನ್ - ಸದಸ್ಯರು

ಪ್ರಥಮವಾಗಿ ವಾರ್ಡ್ ಕಾರ್ಯದರ್ಶಿಗಳು ಹಾಗೂ ಸಂಚಾಲಕರು ಆದ ಶ್ರೀಮತಿ. ಶಿಲ್ಪಶ್ರೀ ರವರು ಸಭೆಗೆ ಆಗಮಸಿದ್ದ ಎಲ್ಲಾ ಅಧಿಕಾರಿಗಳು, ಸದಸ್ಯರು ಮತ್ತು ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಿದರು. ಹಿಂದಿನ ಸಭೆಯ ನಡವಳಿಗಳನ್ನು ಓದಿ ತಿಳಿಸಿದರು. ಹಾಗೂ ಇಂದಿನ ಸಭೆಯ ಅಜೆಂಡಾ ಹಾಗೂ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ ಸಭೆಗೆ ಮಾಹಿತಿ ನೀಡುವಂತೆ ಕೋರಿದರು.

- 80 ಅಡಿ ರಸ್ತೆಯಲ್ಲಿ ಸ್ಯಾನಿಟರಿ ಲೈನ್ ಬದಲಾಯಿಸಬೇಕೆಂದು ಸಬೆಯಲ್ಲಿ ಹಾಜರಿದ್ದ ಶ್ರೀ. ಚಂದ್ರುರವರು ತಿಳಿಸಿದರು. ಇದಕ್ಕೆ ಸಂಬಂಧಪಟ್ಟ ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು ರವರು ಮುಂದಿನ ದಿನಗಳಲ್ಲಿ ಸೂಕ್ತ ರೀತಿಯ ಲೈನ್ ಬದಲಾವಣೆಯನ್ನು ಕೈಗೊಳ್ಳಲಾಗುವುದೆಂದು ತಿಳಿಸಿದರು.

- 18ನೇ ಮುಖ್ಯರಸ್ತೆಯಲ್ಲಿ ಮೋರಿಯನ್ನು ಡೀಸಿಲ್ಟ್ ಮಾಡಿಕೊಡಬೇಕೆಂದು ಶ್ರೀ ಚಂದ್ರು ರವರು ಸಭೆಯಲ್ಲಿ ಕೋರಿರುತ್ತಾರೆ. ಇದಕ್ಕೆ ಸಂಬಂಧಪಟ್ಟ ಸಹಾಯಕ ಅಭಿಯಂತರರು ರವರು ಮುಂದಿನ ದಿನಗಳಲ್ಲಿ ಡೀಸಿಲ್ಟ್ ಕೈಗೊಳ್ಳಲಾಗುವುದೆಂದು ತಿಳಿಸಿದರು.

- ಅನಂದಪುರ ಸ್ಲಂನಲ್ಲಿ ವಾಸಿಸುತ್ತಿರುವ ಸಾರ್ವಜನಿಕರು ಕುಡಿಯುವ ನೀರಿನ ಅಭಾವದ ಬಗ್ಗೆ ಸಭೆಯಲ್ಲಿ ಹಾಜರಿದ್ದ ನೋಡಲ್ ಅಧಿಕಾರಿಯವರಿಗೆ ದೂರುನ್ನು ಸಲ್ಲಿಸಿರುತ್ತಾರೆ. ಸಭೆಯಲ್ಲಿ ಹಾಜರಿದ್ದ ಬಿ.ಡ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಕುಡಿಯುವ ನೀರಿನ ಅಭಾವದ ಬಗ್ಗೆ ವಿವರವಾಗಿ ನೋಡಲ್ ಅಧಿಕಾರಿಯವರಿಗೆ ವಿವರಿಸಲಾಯಿತು. ಇದಕ್ಕೆ

➢ ವಾರ್ಡ್ ವ್ಯಾಪ್ತಿಯಲ್ಲಿ ಹಲವು ರಸ್ತೆಗಳಲ್ಲಿನ ಡಿಬ್ರೀಸ್‌ನ್ನು ತೆಗೆಯುವ ಬಗ್ಗೆ ಸಾರ್ವಜನಿಕರು ಸಭೆಯಲ್ಲಿ ಹಾಜರಿದ್ದ ನೋಡಲ್ ಅಧಿಕಾರಿಯವರಿಗೆ ದೂರುನ್ನು ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಪಟ್ಟ ಸಹಾಯಕ ಅಭಿಯಂತರರು ರವರು ಸಿಲ್ಟ್ ಅಂಡ್ ಟ್ರಾಕ್ಟರ್ ಇಲ್ಲದಿರುವ ಕಾರಣ ಮುಂದಿನ ದಿನಗಳಲ್ಲಿ ಟೆಂಡರ್ ಪ್ರಕ್ರಿಯೆ ಮುಗಿದು, ವರ್ಕ್ ಆರ್ಡರ್ ನೀಡಿದ ನಂತರ ಡಿಬ್ರಿಸ್‌ನ್ನು ತೆಗೆಯಲಾಗುವುದು ಎಂದು ತಿಳಿಸಿರುತ್ತಾರೆ.

Shilpa
**ಕಾರ್ಯದರ್ಶಿಗಳು**
**ವಾರ್ಡ್ ಸಮಿತಿ-88**

23/11/21
**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ 88**
**ಹಾಗೂ ನೋಡಲ್ ಅಧಿಕಾರಿಗಳು,**
**ವಾರ್ಡ್ 88**